ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಜಾಬ್ ಕಾರ್ಡ್‌ಗಳನ್ನು ನೀಡಲು ವಿಳಂಬ ಮಾಡುತ್ತಿರುವ ಕುರಿತು

ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):-

717 (669) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋವಿಡ್ ಹಿನ್ನೆಲೆಯಲ್ಲಿ ನಗರ ಪ್ರದೇಶದಿಂದ ಗ್ರಾಮೀಣ ಭಾಗಕ್ಕೆ ಹಿಂದಿರುಗಿದ ವಲಸೆ ಕಾರ್ಮಿಕರಿಗೆ ಸ್ಥಳೀಯವಾಗಿ ಉದ್ಯೋಗಾವಕಾಶ ಒದಗಿಸಿಕೊಡುವ ನಿಟ್ಟಿನಲ್ಲಿ ಸರ್ಕಾರ ಜಾಬ್ ಕಾರ್ಡ್ ವಿತರಿಸಿದೆಯೇ ;

(ಆ) ವಿತರಿಸಿದ್ದಲ್ಲಿ, ಎಷ್ಟು ಜನರಿಗೆ ಜಾಬ್‌ಕಾರ್ಡ್‌ಗಳನ್ನು ವಿತರಿಸಿ, ಉದ್ಯೋಗಗಳನ್ನು ಕಲ್ಪಿಸಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕೋವಿಡ್ ಸಾಂಕ್ರಾಮಿಕ ರೋಗ ಇನ್ನೂ ಪೂರ್ಣ ಪ್ರಮಾಣದಲ್ಲಿ ನಿಯಂತ್ರಣಕ್ಕೆ ಬಂದಿಲ್ಲದಿದ್ದರೂ ಜಾಬ್‌ಕಾರ್ಡ್ ನೀಡುವುದನ್ನು ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?